# ತೋಟಗಾರಿಕೆ ಸ್ಥಾಯಿ ಸಮಿತಿ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:17-11-2020ರ ನಡವಳಿಗಳು

## ವಿಷಯದ ಸಂಖ್ಯೆ: 493/2020-21

## ಪ್ರಸ್ತಾವನೆ :

ಟಿಪ್ಪಣಿಯಲ್ಲಿ ವಿವರಿಸಿರುವಂತೆ, 2020-21 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ ಪಿ-3768 ರಲ್ಲಿ ವಾರ್ಡ್ ನಂ.82 ಕ್ಕೆ ಮೀಸಲಿರಿಸಿದ ಅನುದಾನ ರೂ.10.00 ಕೋಟಿಗಳಲ್ಲಿ ಸದರಿ ವಾರ್ಡ್‌ನಲ್ಲಿ ಬರುವ ಗರುಡಾಚಾರ್ ಪಾಳ್ಯ (ಮಹದೇವಪುರ ಗ್ರಾಮ ಸರ್ವೆ ನಂ.86) ಗೋಶಾಲ ಕೆರೆಯನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಯನ್ನು ರೂ.300.00 ಲಕ್ಷಗಳ ಅನುದಾನದಲ್ಲಿ ಕೈಗೊಳ್ಳುವ ಸಲುವಾಗಿ, **"Comprehensive Development work at Garudacharpalya (Goshala) lake in ward no.82"** ಕಾಮಗಾರಿಗೆ ಜಾಬ್ ಕೋಡ್ ನೀಡಲು ಮಾನ್ಯ ಆಯುಕ್ತರು ಅನುಮೋದನೆ ನೀಡಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 679 ಎಂಎನ್‌ಯು 2018 ಬೆಂಗಳೂರು ದಿನಾಂಕ:03-08-2019 ರಂತೆ ಅರಣ್ಯ ಇಲಾಖೆಯ ವಶದಲ್ಲಿರುವ ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲು ಆದೇಶಿಸಿರುವಂತೆ ಮಹದೇವಪುರ ವಲಯದ ಮಹದೇವಪುರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗರುಡಾಚಾರ್ ಪಾಳ್ಯ (ಮಹದೇವಪುರ ಗ್ರಾಮ ಸರ್ವೆ ನಂ.86) ಗೋಶಾಲ ಕೆರೆಯನ್ನು ಬಿ.ಬಿ.ಎಂ.ಪಿ ವಶಕ್ಕೆ ಹಸ್ತಾಂತರಿಸಿಕೊಳ್ಳಲಾಗಿರುತ್ತದೆ.

ಗರುಡಾಚಾರ್ ಪಾಳ್ಯ (ಮಹದೇವಪುರ ಗ್ರಾಮ ಸರ್ವೆ ನಂ.86) ಗೋಶಾಲ ಕೆರೆ ವಿಸ್ತಾರವು 5 ಎಕರೆ 14 ಗುಂಟೆಗಳಿದ್ದು ಸದರಿ ಕೆರೆಯ ಅಭಿವೃದ್ಧಿಗಾಗಿ ಈ ಕಛೇರಿಯ ವತಿಯಿಂದ ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಅನುಮೋದನೆಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿರುತ್ತದೆ. ಸದರಿ ಯೋಜನಾ ವರದಿಯಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೆ ಸ್ಥಳಕ್ಕನುಗುಣವಾಗಿ ಹಾಗೂ ಪ್ರಸ್ತುತ ಹಂಚಿಕೆ ಮಾಡಿರುವ ಅನುದಾನಕ್ಕನುಗುಣವಾಗಿ ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡು ರೂ.300.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಸಂಖ್ಯೆ:082-21-000015 ರಂತೆ ರುತ್ತದೆ. ಕಾಮಗಾರಿ ಸಂಕೇತ ಪಡೆಯಲಾಗಿರುತ್ತದೆ.

ಮುಂದುವರೆದು, ರೂ.300.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ-2018-19 ಮತ್ತು ಸಣ್ಣ ನೀರಾವರಿ ಇಲಾಖೆ ಬೆಂಗಳೂರು ವೃತ್ತ-2018-19ನೇ ಸಾಲಿನ ದರಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 615 ಎಂಎನ್‌ವೈ 2015 ದಿನಾಂಕ:01-03-2016 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ರೂ.1.00 ಕೋಟಿಯಿಂದ ರೂ.3.00 ಕೋಟಿಯವರೆಗಿನ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಅನುಮೋದನೆ ನೀಡುವ ಅಧಿಕಾರವನ್ನು ಸ್ಥಾಯಿ ಸಮಿತಿಗೆ ಪ್ರತ್ಯಾಯೋಜಿಸಲಾಗಿರುತ್ತದೆ.

ಮುಂದುವರೆದು ಮಾನ್ಯ ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20 ದಿನಾಂಕ:05-11-2019 ರ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರವೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಿಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, "Comprehensive Development work at Garudacharpalya (Goshala) lake in ward no.82" ಕಾಮಗಾರಿಯ ಅಂದಾಜು ಮೊತ್ತ ರೂ.300.00 ಲಕ್ಷಗಳಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಾಧಿಕಾರವು ತೋಟಗಾರಿಕೆ ಸ್ಥಾಯಿ ಸಮಿತಿಯ ವ್ಯಾಪ್ತಿಯಲ್ಲಿರುವುದರಿಂದ, ಆಡಳಿತಾತ್ಮಕ ಅನುಮೋದನೆ ಕೋರಿ ತೋಟಗಾರಿಕೆ ಸ್ಥಾಯಿ ಸಮಿತಿಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020ರ ಟಿಪ್ಪಣಿ.

**ತೀರ್ಮಾನ :** **ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020 ರ ಟಿಪ್ಪಣಿಯನ್ನು ಒಪ್ಪಿದೆ.**

(ಗೌರವ ಗುಪ್ತ)
**ಆಡಳಿತಗಾರರು**

**ತೋಟಗಾರಿಕೆ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:17-11-2020 ರ ನಡವಳಿಗಳು**

**ವಿಷಯದ ಸಂಖ್ಯೆ: 494/2020-21**

**ಪ್ರಸ್ತಾವನೆ :**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 39 ಬೆಂಆಸೇ ಬೆಂಗಳೂರು, ದಿನಾಂಕ:11-12-2019 ರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿರುವ ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲು ಆದೇಶಿಸಿರುವಂತೆ ಮಹದೇವಪುರ ವಲಯದ ಕೆ.ಆರ್.ಪುರಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗಂಗಶೆಟ್ಟಿ ಕೆರೆಯನ್ನು ಬಿ.ಬಿ.ಎಂ.ಪಿ ವಶಕ್ಕೆ ಹಸ್ತಾಂತರಿಸಿಕೊಳ್ಳಲಾಗಿರುತ್ತದೆ.

ಗಂಗಶೆಟ್ಟಿ ಕೆರೆ ವಿಸ್ತಾರವು 21 ಎಕರೆ 27 ಗುಂಟೆಗಳಿದ್ದು, ಸದರಿ ಕೆರೆಯ ಅಭಿವೃದ್ಧಿಗಾಗಿ ಈ ಕಛೇರಿಯ ವತಿಯಿಂದ ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಅನುಮೋದನೆಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿರುತ್ತದೆ. ಸದರಿ ಯೋಜನಾ ವರದಿಯಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೆ ಸ್ಥಳಕ್ಕನುಗುಣವಾಗಿ ಹಾಗೂ ಪ್ರಸ್ತುತ ಹಂಚಿಕೆ ಮಾಡಿರುವ ಅನುದಾನಕ್ಕನುಗುಣವಾಗಿ ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡು ರೂ.400.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಸಂಖ್ಯೆ:308-20-000025 ರಂತೆ ಕಾಮಗಾರಿ ಸಂಕೇತ ಪಡೆಯಲಾಗಿರುತ್ತದೆ.

ಮುಂದುವರೆದು, ರೂ.400.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ-2018-19 ಮತ್ತು ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ವೃತ್ತ-2018-19ನೇ ಸಾಲಿನ ದರಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 615 ಎಂಎನ್‌ವೈ 2015 ದಿನಾಂಕ:01-03-2016 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ರೂ.3.00 ಕೋಟಿಯಿಂದ ರೂ.10.00 ಕೋಟಿಯವರೆಗಿನ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಅನುಮೋದನೆ ನೀಡುವ ಅಧಿಕಾರವನ್ನು ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಗೆ ಪ್ರತ್ಯಾಯೋಜಿಸಲಾಗಿದೆ.

ಮುಂದುವರೆದು, ಮಾನ್ಯ ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20, ದಿನಾಂಕ:05-11-2019 ರ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರವೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, **"Development of Gangashetty kere"** ಕಾಮಗಾರಿಯ ಅಂದಾಜು ಮೊತ್ತ ರೂ.400.00 ಲಕ್ಷಗಳಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಾಧಿಕಾರವು ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ವ್ಯಾಪ್ತಿಯಲ್ಲಿರುವುದರಿಂದ, ಆಡಳಿತಾತ್ಮಕ ಅನುಮೋದನೆ ಕೋರಿ ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020ರ ಟಿಪ್ಪಣಿ.

**<u>ತೀರ್ಮಾನ :</u>** **ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020 ರ ಟಿಪ್ಪಣಿಯನ್ನು ಒಪ್ಪಿದೆ.**

**(ಗೌರವ ಗುಪ್ತ)**
**ಆಡಳಿತಗಾರರು**

## ತೋಟಗಾರಿಕೆ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:17-11-2020 ರ ನಡವಳಿಗಳು

**ವಿಷಯದ ಸಂಖ್ಯೆ: 495/2020-21**

**ಪ್ರಸ್ತಾವನೆ :**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 39 ಬೆಂಆಸೇ ಬೆಂಗಳೂರು, ದಿನಾಂಕ:11-12-2019 ರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿರುವ ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲು ಆದೇಶಿಸಿರುವಂತೆ ಮಹದೇವಪುರ ವಲಯದ ಕೆ.ಆರ್.ಪುರಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಹೊರಮಾವು (ಜಯಂತಿ) ಕೆರೆಯನ್ನು ಬಿ.ಬಿ.ಎಂ.ಪಿ ವಶಕ್ಕೆ ಹಸ್ತಾಂತರಿಸಿಕೊಳ್ಳಲಾಗಿರುತ್ತದೆ.

ಹೊರಮಾವು ಕೆರೆ ವಿಸ್ತಾರವು 37 ಎಕರೆ 14 ಗುಂಟೆಗಳಿದ್ದು ಸದರಿ ಕೆರೆಯ ಅಭಿವೃದ್ಧಿಗಾಗಿ ಈ ಕಛೇರಿಯ ವತಿಯಿಂದ ವಿವರವಾದ ಯೋಜನಾ ವರದಿಯನ್ನು ತಯಾರಿಸಿ ಅನುಮೋದನೆಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿರುತ್ತದೆ. ಸದರಿ ಯೋಜನಾ ವರದಿಯಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೆ ಸ್ಥಳಕ್ಕನುಗುಣವಾಗಿ ಹಾಗೂ ಪ್ರಸ್ತುತ ಹಂಚಿಕೆ ಮಾಡಿರುವ ಅನುದಾನಕ್ಕನುಗುಣವಾಗಿ ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡು ರೂ.400.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಸಂಖ್ಯೆ:308-20-000024 ರಂತೆ ಕಾಮಗಾರಿ ಸಂಕೇತ ಪಡೆಯಲಾಗಿರುತ್ತದೆ.

ಮುಂದುವರೆದು, ರೂ.400.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ, 2018-19 ಮತ್ತು ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ವೃತ್ತ, 2018-19ನೇ ಸಾಲಿನ ದರಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 615 ಎಂಎನ್‌ವೈ 2015 ದಿನಾಂಕ:01-03-2016 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ರೂ.3.00 ಕೋಟಿಯಿಂದ ರೂ.10.00 ಕೋಟಿಯವರೆಗಿನ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಅನುಮೋದನೆ ನೀಡುವ ಅಧಿಕಾರವನ್ನು ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಗೆ ಪ್ರತ್ಯಾಯೋಜಿಸಲಾಗಿದೆ.

ಮುಂದುವರೆದು ಮಾನ್ಯ ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20 ದಿನಾಂಕ:05-11-2019 ರ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರವೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, **"Development of Horamavu Lake"** ಕಾಮಗಾರಿಯ ಅಂದಾಜು ಮೊತ್ತ ರೂ.400.00 ಲಕ್ಷಗಳಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಾಧಿಕಾರವು ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ವ್ಯಾಪ್ತಿಯಲ್ಲಿರುವುದರಿಂದ, ಆಡಳಿತಾತ್ಮಕ ಅನುಮೋದನೆ ಕೋರಿ ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020ರ ಟಿಪ್ಪಣಿ.

**<u>ತೀರ್ಮಾನ :</u> ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020 ರ ಟಿಪ್ಪಣಿಯನ್ನು ಒಪ್ಪಿದೆ.**

(ಗೌರವ ಗುಪ್ತ)
ಆಡಳಿತಗಾರರು

**ತೋಟಗಾರಿಕೆ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:17-11-2020 ರ ನಡವಳಿಗಳು**

**ವಿಷಯದ ಸಂಖ್ಯೆ: 496/2020-21**

**ಪ್ರಸ್ತಾವನೆ :**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 445 ಬೆಂಆಸೇ 2014 ಬೆಂಗಳೂರು, ದಿನಾಂಕ:06-02-2016 ರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿರುವ ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲು ಆದೇಶಿಸಿರುವಂತೆ ಬೊಮ್ಮನಹಳ್ಳಿ ವಲಯದ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಸಾರಕ್ಕಿ ಕೆರೆಯನ್ನು ಬಿ.ಬಿ.ಎಂ.ಪಿ ವಶಕ್ಕೆ ಹಸ್ತಾಂತರಿಸಿಕೊಳ್ಳಲಾಗಿರುತ್ತದೆ.

ಸಾರಕ್ಕಿ ಕೆರೆ ವಿಸ್ತಾರವು 82 ಎಕರೆ 24 ಗುಂಟೆಗಳಿದ್ದು, ಸದರಿ ಕೆರೆಯು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿದ್ದ ಸಂದರ್ಭದಲ್ಲಿ ಸಂಪೂರ್ಣವಾದ ಯೋಜನಾ ವರದಿಯನ್ನು ತಯಾರಿಸಿ ಅನುಮೋದನೆಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿ ಸದರಿ ಯೋಜನಾ ವರದಿಗೆ ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆ ದೊರೆತಿರುತ್ತದೆ. ಸದರಿ ಯೋಜನಾ ವರದಿಯಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೆ ಸ್ಥಳಕ್ಕನುಗುಣವಾಗಿ ಹಾಗೂ ಪ್ರಸ್ತುತ ಹಂಚಿಕೆ ಮಾಡಿರುವ ಅನುದಾನಕ್ಕನುಗುಣವಾಗಿ ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡು ರೂ.500.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಸಂಖ್ಯೆ:186-21-000009 ರಂತೆ ಕಾಮಗಾರಿ ಸಂಕೇತ ಪಡೆಯಲಾಗಿರುತ್ತದೆ.

ಮುಂದುವರೆದು, ರೂ.500.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ, 2018-19 ಮತ್ತು ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ವೃತ್ತ, 2018-19ನೇ ಸಾಲಿನ ದರಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 615 ಎಂಎನ್‌ವೈ 2015 ದಿನಾಂಕ:01-03-2016 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ರೂ.3.00 ಕೋಟಿಯಿಂದ ರೂ.10.00 ಕೋಟಿಯವರೆಗಿನ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಅನುಮೋದನೆ ನೀಡುವ ಅಧಿಕಾರವನ್ನು ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಗೆ ಪ್ರತ್ಯಾಯೋಜಿಸಲಾಗಿದೆ.

ಮುಂದುವರೆದು ಮಾನ್ಯ ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20 ದಿನಾಂಕ:05-11-2019ರ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರವೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಲಾಗಿರುತ್ತದೆ..

ಈ ಹಿನ್ನಲೆಯಲ್ಲಿ, **“Development of Sarakki lake in ward no.186”** ಕಾಮಗಾರಿಯ ಅಂದಾಜು ಮೊತ್ತ ರೂ.500.00 ಲಕ್ಷಗಳಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಾಧಿಕಾರವು ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ವ್ಯಾಪ್ತಿಯಲ್ಲಿರುವುದರಿಂದ, ಆಡಳಿತಾತ್ಮಕ ಅನುಮೋದನೆ ಕೋರಿ ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020ರ ಟಿಪ್ಪಣಿ.

**ತೀರ್ಮಾನ :** **ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:19-10-2020 ರ ಟಿಪ್ಪಣಿಯನ್ನು ಒಪ್ಪಿದೆ.**

(ಗೌರವ ಗುಪ್ತ)
**ಆಡಳಿತಗಾರರು**

## ತೋಟಗಾರಿಕೆ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:17-11-2020 ರ ನಡವಳಿಗಳು

**ವಿಷಯದ ಸಂಖ್ಯೆ: 503/2020-21**

**ಪ್ರಸ್ತಾವನೆ :**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 449 ಬೆಂಆಸೇ 2016, ದಿನಾಂಕ:14-09-2016 ರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿರುವ 58 ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲು ಆದೇಶಿಸಿರುವಂತೆ ಬೊಮ್ಮನಹಳ್ಳಿ ವಲಯದ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಅರಕೆರೆ ವಾರ್ಡ್-193 ರ ವ್ಯಾಪ್ತಿಯಲ್ಲಿನ ಹುಳಿಮಾವು ಕೆರೆಯನ್ನು ಬಿ.ಬಿ.ಎಂ.ಪಿ ವಶಕ್ಕೆ ಹಸ್ತಾಂತರಿಸಿಕೊಳ್ಳಲಾಗಿರುತ್ತದೆ.

ಹುಳಿಮಾವು ವಿಸ್ತಾರವು 140 ಎಕರೆ 17 ಗುಂಟೆಗಳಿದ್ದು ಸದರಿ ಕೆರೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿದ್ದ ಸಂದರ್ಭದಲ್ಲಿ ಅರಕೆರೆಗೆ 2012-13 ನೇ ಸಾಲಿನಲ್ಲಿ ಸಂಪೂರ್ಣವಾದ ಯೋಜನಾ ವರದಿಯನ್ನು ತಯಾರಿಸಿ ಅನುಮೋದನೆಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿದ್ದು, ಸದರಿ ಯೋಜನಾ ವರದಿಗೆ ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆ ದೊರೆತಿರುತ್ತದೆ. ಸದರಿ ಯೋಜನಾ ವರದಿಯಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೆ ಸ್ಥಳಕ್ಕನುಗುಣವಾಗಿ ಹಾಗೂ ಪ್ರಸ್ತುತ ಹಂಚಿಕೆ ಮಾಡಿರುವ ಅನುದಾನಕ್ಕನುಗುಣವಾಗಿ ಸಂಖ್ಯೆ:193-21-000013 ರಂತೆ ಕಾಮಗಾರಿ ಸಂಕೇತ ಪಡೆಯಲಾಗಿದ್ದು, ಇದಕ್ಕನುಗುಣವಾಗಿ ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡು ಪರಿಷ್ಕೃತ ಅಂದಾಜು ಪಟ್ಟಿಯನ್ನು ಈ ಕೆಳಕಂಡ ಅಂಶಗಳಿಗೆ ತಯಾರಿಸಲಾಗಿರುತ್ತದೆ.

1. Improvements to Lake bed
2. Construction of sewage diversion

ಮುಂದುವರೆದು, ಪರಿಷ್ಕೃತ ಅಂದಾಜು ಪಟ್ಟಿಯನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ-2018-19 ಮತ್ತು ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ವೃತ್ತ-2018-19ನೇ ಸಾಲಿನ ದರಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 615 ಎಂಎನ್‌ವೈ 2015 ದಿನಾಂಕ:01-03-2016ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ರೂ.3.00 ಕೋಟಿಯಿಂದ ರೂ.10.00 ಕೋಟಿಯವರೆಗಿನ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಅನುಮೋದನೆ ನೀಡುವ ಅಧಿಕಾರವನ್ನು ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಗೆ ಪ್ರತ್ಯಾಯೋಜಿಸಲಾಗಿದೆ.

ಮುಂದುವರೆದು ಮಾನ್ಯ ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20 ದಿನಾಂಕ:05-11-2019ರ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರವೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, **"Development of Hulimavu Lake 1st stage"** (ಹುಳಿಮಾವು) ಕಾಮಗಾರಿಯ ಅಂದಾಜು ಮೊತ್ತ ರೂ.500.00 ಲಕ್ಷಗಳಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಾಧಿಕಾರವು ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ವ್ಯಾಪ್ತಿಯಲ್ಲಿರುವುದರಿಂದ, ಆಡಳಿತಾತ್ಮಕ ಅನುಮೋದನೆ ಕೋರಿ ತೋಟಗಾರಿಕೆ ಸ್ಥಾಯಿ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:07-11-2020ರ ಟಿಪ್ಪಣಿ.

**ತೀರ್ಮಾನ :** **ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:07-11-2020 ರ ಟಿಪ್ಪಣಿಯನ್ನು ಒಪ್ಪಿದೆ.**

(ಗೌರವ ಗುಪ್ತ)
ಆಡಳಿತಗಾರರು

## ತೋಟಗಾರಿಕೆ ಸ್ಥಾಯಿ ಸಮಿತಿ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ದಿನಾಂಕ:17-11-2020ರ ನಡವಳಿಗಳು

**ವಿಷಯದ ಸಂಖ್ಯೆ: 504 /2020-21**

**ಪ್ರಸ್ತಾವನೆ :**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 39 ಬೆಂಅಸೇ 2019, ದಿನಾಂಕ: 11-12-2019ರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿರುವ 28 ಕೆರೆಗಳು, ಕರ್ನಾಟಕ ಅರಣ್ಯ ಇಲಾಖೆಯ ವಶದಲ್ಲಿರುವ 9 ಕೆರೆಗಳು ಮತ್ತು ಬೆಂಗಳೂರು ಮೆಟ್ರೋ ನಿಗಮದ ವಶದಲ್ಲಿರುವ 1 ಕೆರೆ, ಅಂದರೆ ಒಟ್ಟಾರೆ 38 ಕೆರೆಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲು ಆದೇಶಿಸಿರುವಂತೆ ಬೊಮ್ಮನಹಳ್ಳಿ ವಲಯದ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಅರಕೆರೆ ವಾರ್ಡ್ 193 ವ್ಯಾಪ್ತಿಯಲ್ಲಿನ ಅರಕೆರೆ ಯನ್ನು ಬಿ.ಬಿ.ಎಂ.ಪಿ ವಶಕ್ಕೆ ಹಸ್ತಾಂತರಿಸಿಕೊಳ್ಳಲಾಗಿರುತ್ತದೆ.

ಅರೆಕೆರೆಯ ವಿಸ್ತಾರವು 37 ಎಕರೆ 21 ಗುಂಟೆಗಳಿದ್ದು, ಸದರಿ ಕೆರೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವಶದಲ್ಲಿದ್ದ ಸಂದರ್ಭದಲ್ಲಿ ಅರಕೆರೆಗೆ 2012-13ನೇ ಸಾಲಿನಲ್ಲಿ ಸಂಪೂರ್ಣವಾದ ಯೋಜನಾ ವರದಿಯನ್ನು ತಯಾರಿಸಿ ಅನುಮೋದನೆಗಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲಾಗಿದ್ದು, ಸದರಿ ಯೋಜನಾ ವರದಿಗೆ ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆ ದೊರೆತಿರುತ್ತದೆ. ಸದರಿ ಯೋಜನಾ ವರದಿಯಲ್ಲಿ ಅಳವಡಿಸಿಕೊಂಡಿರುವ ಅಂಶಗಳಿಗೆ ಸ್ಥಳಕ್ಕನುಗುಣವಾಗಿ ಹಾಗೂ ಪ್ರಸ್ತುತ ಹಂಚಿಕೆ ಮಾಡಿರುವ ಅನುದಾನಕ್ಕನುಗುಣವಾಗಿ ಸಂಖ್ಯೆ:193-21-000014 ರಂತೆ ಕಾಮಗಾರಿ ಸಂಕೇತ ಪಡೆಯಲಾಗಿದ್ದು, ಇದಕ್ಕನುಗುಣವಾಗಿ ಪ್ರಮುಖ ಅಂಶಗಳನ್ನು ಅಳವಡಿಸಿಕೊಂಡು ಪರಿಷ್ಕೃತ ಅಂದಾಜು ಪಟ್ಟಿಯನ್ನು ಈ ಕೆಳಕಂಡ ಅಂಶಗಳಿಗೆ ತಯಾರಿಸಲಾಗಿರುತ್ತದೆ.

1. Sewage Diversion drain
2. Dewatering and jungldе clearance
3. Construction of Silt trap
4. Construction of sedimentation pond

ಮುಂದುವರೆದು, ಪರಿಷ್ಕೃತ ಅಂದಾಜು ಪಟ್ಟಿಯನ್ನು ಕರ್ನಾಟಕ ಲೋಕೋಪಯೋಗಿ ಇಲಾಖೆ, ಬೆಂಗಳೂರು ವೃತ್ತ - 2018-19 ಮತ್ತು ಸಣ್ಣ ನೀರಾವರಿ ಇಲಾಖೆ, ಬೆಂಗಳೂರು ವೃತ್ತ - 2018-19ನೇ ಸಾಲಿನ ದರಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿದ್ದು, ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 615 ಎಂಎನ್‌ವೈ 2015 ದಿನಾಂಕ:01-03-2016ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವ ರೂ.1.00 ಕೋಟಿಯಿಂದ ರೂ.3.00 ಕೋಟಿಯವರೆಗಿನ ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಅನುಮೋದನೆ ನೀಡುವ ಅಧಿಕಾರವನ್ನು ಸ್ಥಾಯಿ ಸಮಿತಿಗೆ ಪ್ರತ್ಯಾಯೋಜಿಸಲಾಗಿದೆ.

ಮುಂದುವರೆದು ಮಾನ್ಯ ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/5287/2019-20 ದಿನಾಂಕ:05-11-2019 ರ ಟಿಪ್ಪಣಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಟೆಂಡರ್ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರವೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವಂತೆ ಸೂಚಿಸಿಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, **"Development of Arekere Lake 1st stage"** ಕಾಮಗಾರಿಯ ಅಂದಾಜು ಮೊತ್ತ ರೂ.300.00 ಲಕ್ಷಗಳಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಾಧಿಕಾರವು ತೋಟಗಾರಿಕೆ ಸ್ಥಾಯಿ ಸಮಿತಿಯ ವ್ಯಾಪ್ತಿಯಲ್ಲಿರುವುದರಿಂದ, ಆಡಳಿತಾತ್ಮಕ ಅನುಮೋದನೆ ಕೋರಿ ತೋಟಗಾರಿಕೆ ಸ್ಥಾಯಿ ಸಮಿತಿಯ ಅಧಿಕಾರಗಳನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:07-11-2020ರ ಟಿಪ್ಪಣಿ.

**ತೀರ್ಮಾನ : ವಿಶೇಷ ಆಯುಕ್ತರು (ಯೋಜನೆ) ರವರ ದಿನಾಂಕ:07-11-2020 ರ ಟಿಪ್ಪಣಿಯನ್ನು ಒಪ್ಪಿದೆ.**

(ಗೌರವ ಗುಪ್ತ)
**ಆಡಳಿತಗಾರರು**